## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1092** |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | **17.03.2025** |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹಾವು ಕಡಿತವನ್ನು ಘೋಷಿತ ಕಾಯಿಲೆಯೆಂದು ಘೋಷಣೆ ಮಾಡಿದ್ದು ಯಾವಾಗ; (ಆದೇಶದ ಪ್ರತಿಯನ್ನು ಒದಗಿಸುವುದು) ಘೋಷಿತ ಕಾಯಿಲೆ ಎಂದು ಘೋಷಣೆ ಮಾಡಿದ ನಂತರ ವರದಿಯಾಗಿರುವ ಪ್ರಕರಣಗಳು ಎಷ್ಟು; ಮೃತಪಟ್ಟವರ ಪೈಕಿ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ. | ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ರಾಜ್ಯದಲ್ಲಿ ಹಾವು ಕಡಿತವನ್ನು ಘೋಷಿತ ಕಾಯಿಲೆ ಎಂದು ದಿನಾಂಕ: 12.02.2024 ರಂದು ಘೋಷಿಸಿ ಅಧಿಸೂಚನೆ ಹೊರಡಿಲಾಗಿರುತ್ತದೆ. **(ಅಧಿಸೂಚನೆಯ ಪ್ರತಿಯನ್ನುಅನುಬಂಧದಲ್ಲಿ ನೀಡಲಾಗಿದೆ).**<br><br>ಘೋಷಿತ ಕಾಯಿಲೆ ಎಂದು ಘೋಷಣೆ ಮಾಡಿದ ನಂತರ ದಿನಾಂಕ 13.02.2024 ರಿಂದ ದಿನಾಂಕ 09.03.2025 ರ ತನಕ ಒಟ್ಟು 14,420 ಹಾವು ಕಡಿತ ಪ್ರಕರಣಗಳು ಹಾಗೂ 111 ಮರಣಗಳು ವರದಿಯಾಗಿರುತ್ತದೆ.<br><br>2024 ರಲ್ಲಿ ಒಟ್ಟು 13,235 ಹಾವು ಕಡಿತ ಪ್ರಕರಣಗಳು ಹಾಗೂ 100 ಮರಣಗಳು ವರದಿಯಾಗಿರುತ್ತದೆ.<br><br>ದಿನಾಂಕ 01.01.2025 ರಿಂದ 09.03.2025 ರ ತನಕ ಒಟ್ಟು 1,754 ಹಾವು ಕಡಿತದ ಪ್ರಕರಣಗಳು ಹಾಗೂ 11 ಮರಣಗಳು ವರದಿಯಾಗಿರುತ್ತದೆ.<br><br>ಹಾವು ಕಡಿತದಿಂದ ಮೃತಪಟ್ಟವರ ಕುಟುಂಬಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಪರಿಹಾರ ನೀಡುತ್ತಿಲ್ಲ. |
| ಆ | ಕಳೆದ 2 ವರ್ಷದಿಂದ ಹಾವು ಕಡಿತಕೊಳಗಾಗಿ ಮೃತಪಟ್ಟವರ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಸಕಾಲಕ್ಕೆ ಹಾವು ಕಡಿತಕ್ಕೆ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2023 ರಲ್ಲಿ ಹಾವು ಕಡಿತದಿಂದ 19 ಮರಣ ಹಾಗೂ 2024 ರಲ್ಲಿ 100 ಮರಣಗಳು ವರದಿಯಾಗಿರುತ್ತದೆ.<br><br>ರಾಜ್ಯದಲ್ಲಿ ಸಕಾಲಕ್ಕೆ ಹಾವು ಕಡಿತಕ್ಕೆ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೆ ಹಾವು ಕಡಿತ ಹಾಗೂ ಮರಣ ಪ್ರಕರಣವನ್ನು ಘೋಷಿತ ಕಾಯಿಲೆ ಎಂದು ದೇಶದಲ್ಲೇ ಪ್ರಪ್ರಥಮ ಬಾರಿಗೆ ರಾಜ್ಯ ಸರ್ಕಾರವು ಘೋಷಿಸಿರುವುದರಿಂದ ಮತ್ತು ತುರ್ತು ಚಿಕಿತ್ಸೆಯ ಅವಶ್ಯಕತೆಯ ಹೆಚ್ಚಿನ ಅರಿವನ್ನು ಮೂಡಿಸಿರುವ ಕಾರಣ ಹಾವು ಕಡಿತ ಪ್ರಕರಣಗಳ ಹಾಗೂ ಮರಣಗಳ ವರದಿ ಸಂಖ್ಯೆ ಏರಿಕೆಯಾಗಿರುತ್ತದೆ. |
| ಇ | ಹಾವು ಕಡಿತಕ್ಕೆ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿರುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಪ್ರಸ್ತುತ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿದೆಯೇ; ಎಂದು ಪರಿಶೀಲನೆ ನಡೆಸಲಾಗಿದೆಯೇ; | ಹಾವು ಕಡಿತ ಚಿಕಿತ್ಸೆಗೆ ಅಗತ್ಯ ಔಷಧಿಗಳನ್ನು ಪ್ರಕರಣಗಳ ಅನುಸಾರ ಸರಬರಾಜು ಮಾಡಲಾಗಿರುತ್ತದೆ.<br><br>ಹಾವು ಕಡಿತದ ಚಿಕಿತ್ಸೆಗೆ ನೀಡುವ Anti Snake Venom (ASV) ಅನ್ನು Essential Drug list (EDL) ನಲ್ಲಿ ಸೇರಿಸಿರುವ ಕಾರಣ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ASV ಅನ್ನು ಸಾಕಷ್ಟು |

| | | |
|---|---|---|
| | | ದಾಸಾನು ಇರಿಸಲಾಗಿದೆ ಹಾಗೂ ಸಕಾಲಕ್ಕೆ ಉಚಿತವಾಗಿ ಚಿಕಿತ್ಸೆ ದೊರೆಯುತ್ತಿದೆ.<br><br>ವೈದ್ಯಾಧಿಕಾರಿಗಳು ಹಾಗೂ ಇತರೇ ಆರೋಗ್ಯ ಸಿಬ್ಬಂದಿಗಳಿಗೆ ವಿವಿಧ ಹಂತಗಳಲ್ಲಿ ಹಾವು ಕಡಿತ ಚಿಕಿತ್ಸೆಯ ಬಗ್ಗೆ ತರಬೇತಿಯನ್ನು ನೀಡಲಾಗಿದೆ.<br><br>ಸಮುದಾಯದಲ್ಲಿ ಹಾವು ಕಡಿತ ನಿಯಂತ್ರಣ ಹಾಗೂ ತಡೆಗಟ್ಟುವಿಕೆಯ ಬಗ್ಗೆ ಅರಿವು ಮೂಡಿಸಲು ವಿವಿಧ ಇಲಾಖೆಗಳ ಸಹಯೋಗದೊಂದಿಗೆ IEC ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br><br>ಹಾವು ಕಡಿತ ಮರಣಗಳನ್ನು ತಗ್ಗಿಸಲು, ಎಲ್ಲಾ ಹಾವು ಕಡಿತದ ಮರಣ ಪ್ರಕರಣಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ Death Audit ನಡೆಸಲಾಗುತ್ತಿದೆ.<br><br>ಸಾಂಪ್ರದಾಯಕ/ನಾಟಿ ಚಿಕಿತ್ಸಕರಿಂದ ಹಾವು ಕಡಿತ ಪ್ರಕರಣಗಳು ಆಸ್ಪತ್ರೆ ಸೇರುವುದು ತಡವಾದಲ್ಲಿ ಅಥವಾ ಮರಣ ಹೊಂದಿದಲ್ಲಿ ಅವರ ಮೇಲೆ Karnataka Private Medical Establishment Act ಅಡಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಕ್ರಮವಹಿಸಲು ಸೂಚಿಸಲಾಗಿದೆ. |
| ಈ | ಹಾವು ಕಡಿತಕ್ಕೊಳಗಾಗಿ ಜೀವ ಹಾನಿ ಆಗುವ ಪ್ರಕರಣಗಳು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿರುವ ಕಾರಣ ಹಾವು ಕಡಿತಕ್ಕೊಳಗಾದವರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡುವ ಕುರಿತು ಸರ್ಕಾರದ ನಿಲುವೇನು; | ಖಾಸಗಿ ಆಸ್ಪತ್ರೆಗಳಲ್ಲಿ ಹಾವು ಕಡಿತದ ಪ್ರಕರಣಗಳಿಗೆ ಚಿಕಿತ್ಸೆ ನೀಡಿದಾಗ ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ (AbArK) ಅಡಿಯಲ್ಲಿ ಖರ್ಚಾದ ವೆಚ್ಚವನ್ನು ಕ್ಲೇಮ್ ಮಾಡಿಕೊಳ್ಳುಹುದಾದ ವ್ಯವಸ್ಥೆ ಇರುತ್ತದೆ.<br><br>ಗ್ರಾಮೀಣ ಪ್ರದೇಶದ ಜನರು ಹೆಚ್ಚಾಗಿ ಖಾಸಗಿ ಆಸ್ಪತ್ರೆಗಿಂತ ಸರ್ಕಾರಿ ಆಸ್ಪತ್ರೆಗಳ ಮೇಲೆಯೇ ಅವಲಂಬಿತರಾಗಿರುತ್ತಾರೆ. |
| ಉ | ಹಾವು ಹಿಡಿಯುವವರಿಗೆ ಸರ್ಕಾರ ಭತ್ಯೆ ನೀಡುತ್ತಿದೆಯೇ: ಹಾವು ಹಿಡಿಯುವಾಗ ಮೃತಪಟ್ಟವರ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆಯೇ? | ಹಾವು ಹಿಡಿಯುವವರಿಗೆ ಸರ್ಕಾರದ ಭತ್ಯೆ ಹಾಗೂ ಹಾವು ಹಿಡಿಯುವಾಗ ಮೃತ ಪಟ್ಟವರ ಕುಟುಂಬಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಪರಿಹಾರ ನೀಡುತ್ತಿಲ್ಲ. |

**ಆಕುಕ 37 ಎಸ್ಎಂಎಂ 2025**

( ದಿನೇಶ್ ಗುಂಡೂರಾವ್ )

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 56 ಸಿಜಿಎಂ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:12.02.2024

## ಅಧಿಸೂಚನೆ

*******

ಭಾರತದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯಿಂದ ನಿರ್ಲಕ್ಷಿತ ಉಷ್ಣವಲಯದ ರೋಗಗಳು (Neglected Tropical Diseases) ಎಂದು ವರ್ಗೀಕರಿಸಲಾಗಿದೆ. ಇದರ ನಿಯಂತ್ರಣದ ಅಂಗವಾಗಿ ಹಾವು ಕಡಿತ ತಡೆಗಟ್ಟುವಿಕೆ ನಿಯಂತ್ರಣ ಆರಂಭಿಸಲಾಗಿದ್ದು ಕರ್ನಾಟಕದಲ್ಲಿ 2023-24 ರಿಂದ ಜಾರಿಗೊಳಿಸಲಾಗಿದೆ. ರಾಜ್ಯದಲ್ಲಿ ಇದನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು, ಮನುಷ್ಯರಲ್ಲಿ ಉಂಟಾಗುವ ಹಾವು ಕಡಿತ ಮತ್ತು ಮರಣ ಪ್ರಕರಣಗಳನ್ನು ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯಿದೆ 2020, ಸೆಕ್ಷನ್ 3 ರನ್ವಯ ಹಾವು ಕಡಿತ ಮತ್ತು ಮರಣವನ್ನು "Notifiable disease ಎಂದು ಘೋಷಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳು/ಖಾಸಗಿ ಆಸ್ಪತ್ರೆಗಳು ಹಾಗೂ ರಾಜ್ಯದ ಎಲ್ಲಾ ವೈದ್ಯಕೀಯ ವಿಜ್ಞಾನ ಸಂಸ್ಥೆಗಳು ಕಡ್ಡಾಯವಾಗಿ, ಹಾವುಗಳ ಕಡಿತ ಚಿಕಿತ್ಸೆಗೆ ಒಳ ಮತ್ತು ಹೊರ ರೋಗಿಯಾಗಿ ಹಾಗೂ ಮರಣ ಉಂಟಾಗುವ ಪ್ರಕರಣಗಳ ಮಾಹಿತಿ/ವಿವರಗಳನ್ನು ಭಾರತ ಸರ್ಕಾರದ Integrated Health Information Platform (IHIP) ನಲ್ಲಿ ದಾಖಲಿಸುವಂತೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/2/24

( ಪದ್ಮ. ವಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆರೋಗ್ಯ 1&2)

**ಇವರಿಗೆ :**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್ಎ), ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪಟ್ಟಿಗೆ 5398, ಬೆಂಗಳೂರು-01
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
5. ಆಯುಕ್ತರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಹೆಬ್ಬಾಳ, ಬೆಂಗಳೂರು
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
8. ವಿಶೇಷ ಆಯುಕ್ತರು, (ಆರೋಗ್ಯ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಕಾರ್ಪೊರೇಷನ್ ಸರ್ಕಲ್ , ಬೆಂಗಳೂರು-560002
9. ರಾಜ್ಯದ ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು -
10. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು -
11. ಜಂಟಿ ನಿರ್ದೇಶಕರು (ವೈದ್ಯಕೀಯ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ
12. ಜಂಟಿ ನಿರ್ದೇಶಕರು (ಸಿಎಂಡಿ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
13. ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ :-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹು ಮಹಡಿಗಳ ಕಟ್ಟಡ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ವೈದ್ಯಕೀಯ ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬಹು ಮಹಡಿಗಳ ಕಟ್ಟಡ
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸ ಸೌಧ.

A2